(ಆ) ಹಾಗಿದ್ದಲ್ಲಿ, ಯಾವ ಮಾರ್ಗಸೂಚಿಯನ್ವಯ ಸರ್ಕಾರ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಸರ್ಕಾರದ ಆದೇಶ ಸಂಖ್ಯೆ. ಹೆಚ್ಎಫ್ಡಬ್ಲ್ಯೂ (ಪಿ.ಆರ್) 76 ಡಬ್ಲ್ಯೂಬಿಎ 2002 ದಿನಾಂಕ: 02.07.2002 ರಲ್ಲಿ 100 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸಿ, ಆನಂತರ ಸರ್ಕಾರದ ಆದೇಶ ಸಂಖ್ಯೆ ಆಕುಕ 1068 ಸಿಜಿಎಂ 2006 ದಿನಾಂಕ: 25.01.2007 ರಲ್ಲಿ ಅಗತ್ಯ ವಿರುವ ಹೆಚ್ಚುವರಿ ಹುದ್ದೆಯನ್ನು ಮಂಜೂರು ಮಾಡಲಾಗಿದೆ ಹಾಗೂ 100 ಹಾಸಿಗೆಯ ಸಾಮರ್ಥ್ಯ ಕಟ್ಟಡ ನಿರ್ಮಾಣಗೊಂಡಿರುತ್ತದೆ.

(ಆ) ಉದ್ಭವಿಸುವುದಿಲ್ಲ.

ಟ್ರಕ್ ಟರ್ಮಿನಲ್ ನಿರ್ಮಾಣ

736 (1263); ಶ್ರೀ ಆನಂದ ಸಿಂಗ್

(ಅ) ಹೊಸಪೇಟೆ ತಾಲ್ಲೂಕಿನ ವಿಜಯನಗರ ಮತಕ್ಷೇತ್ರ ವ್ಯಾಪ್ತಿಯಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

(ಆ) ಹಾಗಿದ್ದಲ್ಲಿ, ನಗರದ ಯಾವ ಜಾಗದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಕ್ಕಾಗಿ ಜಾಗ ಗುರ್ತಿಸಲಾಗಿದೆ. ಇದಕ್ಕೆ ನಿಗಧಿಪಡಿಸಿರುವ ಅನುದಾನ ಎಷ್ಟು;

(ಇ) ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)

(ಅ) ಹೌದು.

(ಆ) ಹೊಸಪೇಟೆ ತಾಲ್ಲೂಕು ಅಮರಾವತಿ ಗ್ರಾಮದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣಕ್ಕಾಗಿ ನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರವು ನಗರ ಮಹಾ ಯೋಜನೆ (ಸಿ.ಡಿ.ಪಿ) ಯಲ್ಲಿ 37.82 ಎಲರೆ ಪ್ರದೇಶವನ್ನು ಗುರುತಿಸಿದೆ.

ಈ ಯೋಜನೆಯ ಒಟ್ಟು ಅಂದಾಜು ವೆಚ್ಚ 56.46 ಕೋಟಿ ರೂ.ಗಳಾಗಿದ್ದು, 2014–15ನೇ ಸಾಲಿನ ಆಯವ್ಯಯದಲ್ಲಿ 18.00 ಕೋಟಿ ರೂ.ಗಳನ್ನು ಒದಗಿಸಿದೆ.

(ಇ) ಯೋಜನೆಯ ನಕ್ಷೆಯನ್ನು ಸಿದ್ದಪಡಿಸಿ ಅನುಮೋದನೆಗಾಗಿ ನಗರಾಭಿವೃದ್ಧಿ ಪ್ರಾಧಿಕಾರ, ಹೊಸಪೇಟೆ ಇವರಿಗೆ ಸಲ್ಲಿಸಿದ್ದು, ಅನುಮೋದನೆಯನ್ನು ನಿರೀಕ್ಷಿಸಲಾಗಿದೆ. ಮುಂದುವರೆದು, ಯೋಜನಾ ಪ್ರದೇಶದಲ್ಲಿ ರಾಷ್ಟ್ರೀಯ ಹೆದ್ದಾರಿಯ ನಾಲ್ಕು ಪಥಗಳ ರಸ್ತೆಯು ಹಾದು ಹೋಗಿರುವುದರಿಂದ ಸದರಿ ಕಾಮಗಾರಿಯ ಸಂದರ್ಭದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳುವಲ್ಲಿ ವಿಳಂಬವಾಗಿದೆ. ಪ್ರಸ್ತುತ ಹೆದ್ದಾರಿ ಕಾಮಗಾರಿ ಪೂರ್ಣಗೊಂಡಿದ್ದು, 2014–15ನೇ ಸಾಲಿನಲ್ಲಿ ಆಡಳಿತಾತ್ಮಕ ಅನುಮೋದನೆ ಪಡೆದು ಕಾಮಗಾರಿಯನ್ನು ವಿವಿಧ ಹಂತಗಳಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ.

ಗಂಗಾ ಕಲ್ಯಾಣ ಯೋಜನೆಯ ಕೊಳವೆ ಬಾವಿಗಳು:

737 (1264); ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ)

(ಅ) ಕಳೆದ ಮೂರು ವರ್ಷಗಳಲ್ಲಿ ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಹೊಸಪೇಟೆ ತಾಲ್ಲೂಕಿನ ವಿಜಯನಗರ ಮತಕ್ಷೇತ್ರ ವ್ಯಾಪ್ತಿಯಲ್ಲಿ ಗಂಗಾ ಕಲ್ಯಾಣ ಯೋಜನೆಯ ಅಡಿಯಲ್ಲಿ ವೈಯಕ್ತಿಕ ಹಾಗೂ ಸಾಮೂಹಿಕ ಕೊಳವೆ ಬಾವಿಗಳನ್ನು ಮಂಜೂರು ಮಾಡಲಾಗಿದೆಯೇ; (ವಿವರಗಳನ್ನು ನೀಡುವುದು)